ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತಮೂರನೆಯ ಅಧಿವೇಶನ
ಗುರುವಾರ, ದಿನಾಂಕ: 4ನೇ ಫೆಬ್ರುವರಿ, 2021

ಆರ್ಥಿಕ ಮಿತವ್ಯಯ ಆದೇಶ ಹಿಂಪಡೆಯುವ ಬಗ್ಗೆ

ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) -

69(476) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಅನುದಾನಿತ ಪ್ರಾಥಮಿಕ, ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಹುದ್ದೆ ಭರ್ತಿ ಮಾಡುವ ಕುರಿತಂತೆ ಆರ್ಥಿಕ ಇಲಾಖೆಯು ಆರ್ಥಿಕ ಮಿತವ್ಯಯದ ಆದೇಶ ಹೊರಡಿಸಿ ಹುದ್ದೆ ಭರ್ತಿ ಮಾಡುವುದನ್ನು ತಡೆಹಿಡಿಯಲಾಗಿದೆಯೇ;

(ಆ) ಹಾಗಿದ್ದಲ್ಲಿ, ಪ್ರಸ್ತುತ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯು ಅನುಮತಿ ನೀಡಿದೆ; (ಪ್ರಾಥಮಿಕ ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳ ಹುದ್ದೆವಾರು ವಿವರ ನೀಡುವುದು) ಈಗಾಗಲೇ ಶಿಕ್ಷಣ ಸಂಸ್ಥೆಗಳು ಹುದ್ದೆಗಳನ್ನು ಇಲಾಖೆಯ ನಿಯಮಗಳಿಗುಣವಾಗಿ ಅಧಿಸೂಚನೆ ಹೊರಡಿಸಿ, ನೇಮಕ ಮಾಡಿ ವೇತನ ಪಡೆಯುವ ಹಂತಕ್ಕೆ ಬಂದಿರುವ ಪ್ರಸ್ತಾವನೆಗಳ ಸಂಖ್ಯೆ ಎಷ್ಟು; ಮತ್ತು ಯಾವುವು; (ಶಿಕ್ಷಣ ಸಂಸ್ಥೆವಾರು, ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳ ವಿವರ ನೀಡುವುದು)

(ಇ) ಈಗಾಗಲೇ ಹುದ್ದೆ ಭರ್ತಿ ಮಾಡಲು ಆರ್ಥಿಕ ಇಲಾಖೆಯ ಅನುಮತಿ ನೀಡಿರುವ ಹುದ್ದೆಗಳ ಸಂಖ್ಯೆ ಎಷ್ಟು; ಅವು ಯಾವುವು; (ಶಿಕ್ಷಣ ಸಂಸ್ಥೆವಾರು ವಿವರ ನೀಡುವುದು) ಆರ್ಥಿಕ ಇಲಾಖೆಯು ಹೊರಡಿಸಿರುವ ಆರ್ಥಿಕ ಮಿತವ್ಯಯದ ಆದೇಶವನ್ನು ಹಿಂಪಡೆಯುವಂತೆ ಅಥವಾ ಸಡಿಲಗೊಳಿಸುವಂತೆ ಈಗಾಗಲೇ ಪ್ರಸ್ತಾವನೆಯನ್ನು ಶಿಕ್ಷಣ ಇಲಾಖೆಯು ಮಂಡಿಸಿದೆಯೇ;ಪ್ರಸ್ತಾನೆಯು ಯಾವ ಹಂತದಲ್ಲಿದೆ; (ಈ ಕುರಿತು ಬಂದಿರುವ ಶಿಫಾರಸ್ಸುಗಳ ಪ್ರತಿ ನೀಡುವುದು)

( ಈ) ಈ ಆದೇಶವನ್ನು ಸಡಿಲಗೊಳಿಸಿ ಖಾಲಿ ಹುದ್ದೆಗಳ ಭರ್ತಿಗೆ ಹಾಗೂ ವೇತನದ ಹಂತಕ್ಕೆ ಬಂದ ಪ್ರಸ್ತಾವನೆಗಳನ್ನು ಅನುಮೋದಿಸಿ ವೇತನ ಬಿಡುಗಡೆಗೊಳಿಸಲು ಆರ್ಥಿಕ ಇಲಾಖೆಯು ಕ್ರಮ ಕೈಗೊಳ್ಳುವುದೇ ?